# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 20.07.2024ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2024ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | | | **ಸಹಿ** |
|---|---|---|---|
| 1. | ಪ್ರೊ. ಪಿ. ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ರಾಮೇ ಗೌಡ ಎಂ.,<br>ಜಂಟಿ ನಿರ್ದೇಶಕರು, (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಎಂ. ಜಯಶಂಕರ್<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು | ಆನ್ ಲೈನ್ |
| 4. | ಡಾ. ಎಸ್. ಬಿ. ಎಂ. ಪ್ರಸನ್ನ | ಸದಸ್ಯರು | |
| 5. | ಡಾ. ಕೆ. ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಎಚ್.ಕೆ | ಸದಸ್ಯರು | |
| 7. | ಡಾ. ವರದರಾಜ ಸಿ. ಎಸ್. | ಸದಸ್ಯರು | |
| 8. | ಶ್ರೀ ಫಾದರ್ ಮೈಕಲ್ ಸಂತುಮಯೋರ್ | ಸದಸ್ಯರು | |
| 9. | ಡಾ. ಜೋಶ್ನ ರಾವ್ ಕೆ. | ಸದಸ್ಯರು | |
| 10. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 11. | ಶ್ರೀಮತಿ ಜುಡಿತ್ ಮೆಂಡೋನ್ಸ್ | ಸದಸ್ಯರು | |
| 12. | ಶ್ರೀ ರಘುರಾಜ್ | ಸದಸ್ಯರು | |
| 13. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 14. | ಡಾ. ಸಂದೇಶ್ ಕೆ. ಯಸ್.<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು | |
| 15. | ಪ್ರೊ. ದೇವೇಂದ್ರಪ್ಪ ಹೆಚ್.<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 16. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 17. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

**ಅನುಪಸ್ಥಿತರು:**

| | | | |
|---|---|---|---|
| 1. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು | |
| 2. | ಶ್ರೀ ಮೊಹಮ್ಮದ್ ಸವಾದ್ | ಸದಸ್ಯರು | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

ಮಾನ್ಯ ಕುಲಪತಿಯವರು ಸಭೆಯಲ್ಲಿ ಮಾತನಾಡುತ್ತಾ, ಈ ಕೆಳಗಿನ ವಿಚಾರಗಳನ್ನು ಸಭೆಯ ಗಮನಕ್ಕೆ ತಂದರು.

1. ಸರಕಾರದಿಂದ ಅನುಮೋದನೆಗೊಳ್ಳದ ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಿಗೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರು ಮತ್ತು ಮಾನ್ಯ ಯು.ಟಿ. ಖಾದರ್., ವಿಧಾನ ಸಭೆಯ ಸ್ಪೀಕರ್ ಅವರುಗಳನ್ನು ದಿನಾಂಕ 12.07.2024ರಂದು ವಿಧಾನಸೌಧದಲ್ಲಿ ಭೇಟಿಯಾಗಿ ಪ್ರಸ್ತುತ ಇರುವ ಸ್ಥಿತಿಗತಿಗಳ ಬಗ್ಗೆ ಚರ್ಚಿಸಲಾಯಿತು. ಈ ಸಂಬಂಧ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ತಿಳಿಸಿರುವ ವಿಚಾರವನ್ನು ಸಭೆಯ ಗಮನಕ್ಕೆ ತರಲಾಯಿತು.
2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕುಂದ ಕನ್ನಡ ಪೀಠವನ್ನು ಸ್ಥಾಪಿಸುವ ಪ್ರಯುಕ್ತ ಸರಕಾರವು ರೂ.50.00 ಲಕ್ಷ (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಅನುದಾನವನ್ನು ಮಂಜೂರು ಮಾಡಲಾಗಿರುವ ವಿಚಾರವನ್ನು ಹಾಗೂ ಸದರಿ ಅನುದಾನ ಮಂಜೂರು ಮಾಡುವಲ್ಲಿ ಸಹಕರಿಸಿದ ಮಾನ್ಯ ಶ್ರೀ ಜಯಪ್ರಕಾಶ್ ಹೆಗ್ಡೆ, ಮಾಜಿ ಅಧ್ಯಕ್ಷರು, ಹಿಂದುಳಿದ ವರ್ಗ ಆಯೋಗ, ಕರ್ನಾಟಕ ಸರಕಾರ ಇವರಿಗೆ ಕೃತಜ್ಞತೆಯನ್ನು ಸಲ್ಲಿಸಲಾಯಿತು.
3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಎಲ್ಲಾ ಸ್ನಾತಕೋತ್ತರ ಕಾರ್ಯಕ್ರಮಗಳ ಪರೀಕ್ಷೆಗಳನ್ನು ದಿನಾಂಕ 15.07.2024ರಿಂದ ಪ್ರಾರಂಭಿಸಲಾಗಿರುವ ವಿಚಾರವನ್ನು ತಿಳಿಸಲಾಯಿತು. ಸ್ನಾತಕ ಪದವಿ ಕಾರ್ಯಕ್ರಮಗಳ ಪರೀಕ್ಷೇಗಳು ನಡೆಯುತ್ತಿದ್ದು, 6ನೇ ಸೆಮಿಸ್ಟರಿನ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಅತೀ ಶೀಘ್ರವಾಗಿ ಕೈಗೊಳ್ಳುವುದಾಗಿ ತಿಳಿಸಲಾಯಿತು.
4. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಪದವಿ ಕಾರ್ಯಕ್ರಮಗಳನ್ನು ರಾಜ್ಯ ಶಿಕ್ಷಣ ನೀತಿಯ ವಿನಿಯಮದಂತೆ ನಡೆಸಲಾಗುವುದಾಗಿ ಹಾಗೂ ಎಲ್ಲಾ ಅಧ್ಯಯನ ಮಂಡಳಿಗಳು ಪಠ್ಯಕ್ರಮಗಳನ್ನು ರಚಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿರುವುದಕ್ಕೆ ಅವರ ಸಹಕಾರಕ್ಕೆ ಕೃತಜ್ಞತೆಯನ್ನು ಸಲ್ಲಿಸಲಾಯಿತು.
5. ಸ್ನಾತಕ ಪದವಿ ಕಾರ್ಯಕ್ರಮಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಈಗಾಗಲೇ ತಯಾರಿಸಿ ಕಾಲೇಜುಗಳಿಗೆ ಸಲ್ಲಿಸಲಾಗಿರುವ ವಿಚಾರವನ್ನು ಹಾಗೂ ದಿನಾಂಕ 12.08.2024ರಿಂದ ಪದವಿ ತರಗತಿಗಳನ್ನು ಪ್ರಾರಂಭಿಸಲಾಗುವುದಾಗಿ ತಿಳಿಸಲಾಯಿತು.

6. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ದೈಹಿಕ ಶಿಕ್ಷಣ ವಿಭಾಗದ ಬಿ.ಪಿ.ಎಡ್., ಪದವಿ ಕಾರ್ಯಕ್ರಮದ 4ನೇ ಸೆಮಿಸ್ಟರಿನಲ್ಲಿ ವ್ಯಾಸಂಗ ಮಾಡುತ್ತಿದ್ದ ಶ್ರೀ ಸುಮಿತ್ ಎಂಬ ವಿದ್ಯಾರ್ಥಿ ರಸ್ತೆ ಅಪಘಾತದಲ್ಲಿ ಅಕಾಲಿಕ ಮರಣಹೊಂದಿರುತ್ತಾರೆ. ಇನ್ನು ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ವಿಭಾಗಕ್ಕೆ ಪ್ರವೇಶಾತಿ ಪಡೆದು ವಸತಿನಿಲಯದಲ್ಲಿ ವಾಸ್ತವ್ಯ ತೆಗೆದುಕೊಳ್ಳುವ ಸಂದರ್ಭಗಳಲ್ಲಿ ಕಟ್ಟುನಿಟ್ಟಾದ ಮಾರ್ಗಸೂಚಿಯನ್ನು ಅಳವಡಿಸಿಕೊಳ್ಳಲು ನಿಲಯಪಾಲಕರುಗಳಿಗೆ ಸೂಚನೆ ನೀಡುವುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.

**I. ನಡವಳಿಗಳ ದೃಢೀಕರಣ**

ದಿನಾಂಕ 21.06.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

**- ನಡವಳಿಯನ್ನು ದೃಢೀಕರಿಸಲಾಯಿತು.**

**ಇತರ ವಿಷಯಗಳಡಿಯ ನಿರ್ಣಯದ ಕ್ರಮ ಸಂಖ್ಯೆ 9ರಲ್ಲಿ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶರವರು ಮಂಡಿಸಿರುವ ಇತರ ವಿಷಯಗಳಿಗೆ ಸಂಬಂಧಿಸಿ ನಿರ್ಣಯ ಕೈಗೊಂಡ ವಿಷಯದಲ್ಲಿ ತಿದ್ದುಪಡಿಯನ್ನು ಮಾಡಿ ನಡವಳಿಯನ್ನು ದೃಢೀಕರಿಸಲಾಯಿತು.**

**"9. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾಯಕ ಯೋಗಿ ಶ್ರೀ ಬಸವಣ್ಣ ಅಧ್ಯಯನ ಪೀಠವನ್ನು ಸ್ಥಾಪಿಸುವ ಬಗ್ಗೆ ನಿಯಮಾನುಸಾರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ನಿರ್ಣಯಿಸಲಾಯಿತು ಹಾಗೂ ಈ ವಿಚಾರವಾಗಿ ಮುತುವರ್ಜಿ ವಹಿಸಿ ಸರ್ಕಾರದಿಂದ ಅನುಮತಿ ಮತ್ತು ಅನುದಾನ ತರುವಲ್ಲಿ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಇವರಿಗೆ ಗಮನ ಹರಿಸಲು ಕೋರಲಾಯಿತು".**

**II. ಅನುಸರಣಾ ವರದಿಯ ಅನುಮೋದನೆ**

ದಿನಾಂಕ 07.06.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

- **ಅನುಮೋದಿಸಲಾಯಿತು**. -

**ಮುಂದುವರಿದು, ಈಗಾಗಲೇ ಪ್ರಕಟಿಸಲಾದ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ವರ್ಷ 2022-23ನೇ ಸಾಲಿನ ವಾರ್ಷಿಕ ವರದಿಗೆ ಸಂಬಂಧಿಸಿದಂತೆ ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಇವರಿಗೆ ಸದರಿ ಸಂಚಿಕೆಯಲ್ಲಿರುವ strength and weaknessಗಳ ಬಗ್ಗೆ ಸಂಕ್ಷಿಪ್ತವಾದ ಅಂಶಗಳನ್ನು ಕಲೆಹಾಕಿ ಬುಲೆಟ್ ಪಾಯಿಂಟ್‌ಗಳೊಂದಿಗೆ ನಮೂದಿಸಿಕೊಂಡು ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ**

**ರವಾನಿಸಬೇಕಾಗಿ ಸಭೆಯಲ್ಲಿ ತಿಳಿಸಲಾಯಿತು. ಅಲ್ಲದೆ ಮುಂದಿನ ಸಿಂಡಿಕೇಟು ಸಭೆಗೆ ಸದರಿ ವಾರ್ಷಿಕ ವರದಿಯ ಬಗ್ಗೆ ಸಮಗ್ರ ಮಾಹಿತಿಗಳೊಂದಿಗೆ ವಿಸ್ತಾರವಾಗಿ ಸಭೆಗೆ ವಿವರಿಸಬೇಕೆಂಬುದಾಗಿಯೂ ತಿಳಿಸಲಾಯಿತು. ಸದರಿ ಮಾಹಿತಿಗಳು ಮುಂದಿನ ವರ್ಷಗಳ ವಾರ್ಷಿಕ ವರದಿಗಳನ್ನು ತಯಾರಿಸುವಲ್ಲಿ ಪ್ರಮುಖವಾದ ಅಡಿಪಾಯವಾಗುವುದಾಗಿ ಸಭೆಯಲ್ಲಿ ಸಲಹೆ ನೀಡಲಾಯಿತು.**

**III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ: ಹಣಕಾಸು :ಸಾ.ಸ.4:1(2024)**

ವಿಷಯ: 2023-24ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಅನುಮೋದನೆಯ ಬಗ್ಗೆ.

ನಿರ್ಣಯ: ವಾರ್ಷಿಕ ಲೆಕ್ಕಪತ್ರಗಳ ವರದಿಯನ್ನು ವಿಸ್ಕೃತವಾಗಿ ಚರ್ಚಿಸಲಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಹಣಕಾಸು :ಸಾ.ಸ.4:2(2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2024-25ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2023-24ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

ನಿರ್ಣಯ: ದಿನಾಂಕ 19.06.2024ರಂದು ನಡೆದ ಹಣಕಾಸು ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಹಣಕಾಸು :ಸಾ.ಸ.4:3(2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2020-21ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ: ಅನುಪಾಲನಾ ವರದಿಯ ಅನುಮೋದನೆ ಕುರಿತು.

ನಿರ್ಣಯ: ಅನುಪಾಲನಾ ವರದಿಯನ್ನು ಅನುಮೋದಿಸಲಾಗಿ ಸರಕಾರದ ಅನುಮೋದನೆಗೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ತಿಳಿಸಲಾಯಿತು. ಮುಂದುವರಿದು, ಆಕ್ಷೇಪಣಾ ಮತ್ತು ವಸೂಲಾತಿ ಮಾಡಿರುವ ಮೊತ್ತಗಳಿಗೆ ಸಂಬಂಧಿಸಿದಂತೆ ಅಂಕಿ ಅಂಶಗಳ ವಿವರಗಳನ್ನು ಮುಂದಿನ ಸಿಂಡಿಕೇಟು ಸಭೆಗೆ ವರದಿ ಮಾಡಬೇಕಾಗಿ ಹಣಕಾಸು ಅಧಿಕಾರಿ (ಪ್ರಭಾರ) ಇವರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಸಾ.ಸ.4:4(2024)**

ವಿಷಯ: Dr. Azizuddin Sultani ಇವರಿಗೆ Post Doctoral Fellowship ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ : ಸಾ.ಸ.4:5 (2024)**

ವಿಷಯ: ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಕ್ಕೆ ಸಂಯೋಜನಾಧಿಕಾರಿ ನೇಮಕಾತಿ ಆಯ್ಕೆ ಮಂಡಳಿಯ ಶಿಫಾರಸ್ಸಿನ ಬಗ್ಗೆ.

ನಿರ್ಣಯ: ದಿನಾಂಕ 03.07.2024ರಂದು ನಡೆದ ಸಮಿತಿಯ ವರದಿಯಲ್ಲಿ ಹಿಂದಿನ ನೇಮಕಾತಿ ಪ್ರಕ್ರಿಯೆಯು ಕ್ರಮಬದ್ಧವಾಗಿದೆ ಎಂಬುದಾಗಿ ಅಭಿಪ್ರಾಯ ಪಡಲಾಗಿದೆ. ಅದಾಗ್ಯೂ, ವಿಶ್ವವಿದ್ಯಾನಿಲಯದ ಹಿತದೃಷ್ಟಿಯಿಂದ ಡಾ.ಭಾರತಿ ಪಿಲಾರು, ಸಹಾಯಕ ಪ್ರಾಧ್ಯಾಪಕರು, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರ ಸೇವೆ ವಿಶ್ವವಿದ್ಯಾನಿಲಯಕ್ಕೆ ಅಗತ್ಯವಿರುತ್ತದೆ ಎಂದು ತೀರ್ಮಾನಿಸಿ, ಕಾಯ್ದಿರಿಸುವ ಪಟ್ಟಿಯಿಂದ ಡಾ.ಸೇಸಪ್ಪ., ಸಹಾಯಕ ಪ್ರಾಧ್ಯಾಪಕರು, ಇವರನ್ನು ಸಹಮತದಿಂದ ಮುಂದಿನ ಆದೇಶದವರೆಗೆ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಕ್ಕೆ ಸಂಯೋಜನಾಧಿಕಾರಿ ಹುದ್ದೆಗೆ ನೇಮಕಾತಿ ಮಾಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ : ಸಾ.ಸ.4:6 (2024)**

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ-ಸ್ಕ್ರೀನಿಂಗ್ ಕಂ ಇವ್ಯಾಲ್ಯುವೇಶನ್/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಸ್ಕ್ರೀನಿಂಗ್ ಕಂ ಇವ್ಯಾಲ್ಯುವೇಶನ್/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ: ಸಾ.ಸ.4:7 (2024)**

ವಿಷಯ: ಅಂಕಪಟ್ಟಿ ಮತ್ತು ಲೆಡ್ಜರ್ ವಹಿಗಳ ಮುದ್ರಣಕ್ಕಾಗಿ ಪ್ರಿಂಟರ್‌ನ್ನು ಬಾಡಿಗೆಗೆ ಪಡೆಯುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಪರೀಕ್ಷಾಂಗ: ಸಾ.ಸ.4:8 (2024)** |
| ವಿಷಯ: | ಜನವರಿ / ಫೆಬ್ರವರಿ 2024ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ. |
| ನಿರ್ಣಯ: | ಪರೀಕ್ಷಾ ಅವ್ಯವಹಾರ ತನಿಖಾ ಸಮಿತಿಯು ವಿಧಿಸಿರುವ ದಂಡನೆಯನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು:ಸಾ.ಸ.4:9 (2024)** |
| ವಿಷಯ: | ಡಾ. ಸಂದೇಶ್ ಕೆ.ಎಸ್, ಸಲ್ಲಿಸಿರುವ ಪ್ರಸ್ತಾವನೆಗಳು. |
| ಪ್ರಸ್ತಾವನೆ ಸಂಖ್ಯೆ1. | Action taken regarding the grievances of Social Work Ph.D. Scholars enrolled at the School of Social Work, Roshani Nilaya, Mangalore particularly concerning their Pre-Registration/Review Examination. |
| ನಿರ್ಣಯ: | ಸದರಿ ವಿಚಾರವನ್ನು ಸಿಂಡಿಕೇಟು ಗಂಭೀರವಾಗಿ ಪರಿಗಣಿಸಿಕೊಂಡು ಈ ಕುರಿತು ವಿಚಾರಣೆ ನಡೆಸಲು ಅಗತ್ಯ ಕ್ರಮಕೈಗೊಳ್ಳಲು ಕುಲಸಚಿವರು (ಪರೀಕ್ಷಾಂಗ) ಇವರ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿಯನ್ನು ರಚಿಸಿಕೊಂಡು ತನಿಖಾ ವರದಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸುವುದಾಗಿ ಸೂಚಿಸಲಾಯಿತು. |
| ಪ್ರಸ್ತಾವನೆ ಸಂಖ್ಯೆ 2. | Appointment of a nominee by the Vice Chancellor to oversee all Ph.D. examinations/presentations as an observer. |
| ನಿರ್ಣಯ: | ಈ ಬಗ್ಗೆ ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ಪರಿನಿಯಮ/ವಿನಿಯಮದಲ್ಲಿ ಅವಕಾಶವಿಲ್ಲದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. |
| ಪ್ರಸ್ತಾವನೆ ಸಂಖ್ಯೆ 3. | Proposal to reconstitute the Board of Studies (PG) of Social Work to ensure the smooth functioning of academic activities within the Department of Social Work. |
| ನಿರ್ಣಯ: | ಈಗಾಗಲೇ ವಿಶ್ವವಿದ್ಯಾನಿಲಯದಲ್ಲಿ ನಿಯಮಾನುಸಾರ ಕ್ರಮಕೈಗೊಂಡಿರುವುದಾಗಿ ಸಭೆಯ ಗಮನಕ್ಕೆ ತರಲಾಯಿತು. |
| ಪ್ರಸ್ತಾವನೆ ಸಂಖ್ಯೆ 4. | Initiative to reduce paper consumption by transitioning letter communications related to meetings and proceedings to electronic mail. |
| ನಿರ್ಣಯ: | ಈಗಾಗಲೇ ವಿಶ್ವವಿದ್ಯಾನಿಲಯದಲ್ಲಿ ಈ ಬಗ್ಗೆ ಕ್ರಮಕೈಗೊಂಡಿರುವುದಾಗಿ ಸಭೆಯ ಗಮನಕ್ಕೆ ತರಲಾಯಿತು. ಅಗತ್ಯಕ್ಕನುಗುಣವಾಗಿ ಕೆಲವು ಸದಸ್ಯರುಗಳಿಗೆ ಹಾರ್ಡ್ ಕಾಪಿಯನ್ನು ಒದಗಿಸುವುದಾಗಿಯೂ ಸಭೆಯಲ್ಲಿ ಸೂಚಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಾರ್ವತ್ರಿಕ:ಸಾ.ಸ.4:10 (2024)** |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ಕ್ರೀಡಾ ಸಲಹಾ ಸಮಿತಿ ಸಭೆಯ ನಡವಳಿಯ ಬಗ್ಗೆ. |
| ನಿರ್ಣಯ: | ಕ್ರೀಡಾ ಸಲಹಾ ಸಮಿತಿ ಸಭೆಯ ನಡವಳಿಯನ್ನು ಅನುಮೋದಿಸಲಾಯಿತು.<br>ಮುಂದುವರಿದು, ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಪದವಿ ಕಾರ್ಯಕ್ರಮಗಳ ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗುವ ಕ್ರೀಡಾ ಶುಲ್ಕಗಳ ವಿವರಗಳ ಬಗ್ಗೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರು ನೇರವಾಗಿ ಮಾನ್ಯ ಕುಲಪತಿಯವರಿಗೆ ಪತ್ರ ಬರೆದಿದ್ದು, ಪತ್ರದಲ್ಲಿ ಉಲ್ಲೇಖಿಸಲಾಗಿರುವ ಪದಗಳ ಬಗ್ಗೆ ಸಭೆಯು ಗಂಭೀರವಾಗಿ ಪರಿಗಣಿಸಿತು. ವಿಶ್ವವಿದ್ಯಾನಿಲಯದಲ್ಲಿ ಸಂಗ್ರಹವಾಗುವ ಕ್ರೀಡಾ ಶುಲ್ಕಗಳ ಮಾಹಿತಿಯನ್ನು ಕಾಲೇಜುಗಳಿಂದ ಪಡೆದುಕೊಂಡು, ಅನುದಾನಿತ/ ಸರಕಾರಿ ಕಾಲೇಜುಗಳಾದಲ್ಲಿ ಒಂದು ಪ್ರತಿಯನ್ನು ಜಂಟಿ ನಿರ್ದೇಶಕರಿಗೆ ರವಾನಿಸಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ಹಣಕಾಸು ಅಧಿಕಾರಿ (ಪ್ರಭಾರ) ಇವರಿಗೆ ಸಭೆಯಲ್ಲಿ ಸೂಚಿಸಲಾಗಿ, ಸದರಿ ಮಾಹಿತಿಯನ್ನು ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ರವಾನಿಸಬೇಕಾಗಿ ಸೂಚಿಸಲಾಯಿತು.<br>ಸದರಿ ಶುಲ್ಕಗಳ ಬಗ್ಗೆ ಕಾಲೇಜುಗಳ ಪ್ರಾಂಶುಪಾಲರು ಮತ್ತು ದೈಹಿಕ ಶಿಕ್ಷಕರುಗಳನ್ನೊಳಗೊಂಡಂತೆ ಸಭೆಯನ್ನು ನಡೆಸಬೇಕಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು. ಅನುದಾನಿತ / ಸರಕಾರಿ ಕಾಲೇಜುಗಳಿಗೆ ಪಾವತಿಸಲಾಗುವ ಕ್ರೀಡಾ ಶುಲ್ಕಗಳ ಭಾಗವನ್ನು ಪರಿಶೀಲಿಸಲು ಕ್ರೀಡಾ ಸಮಿತಿಗೆ ಮಂಡಿಸಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ತೀರ್ಮಾನಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಡಿಇವಿ:ಸಾ.ಸ.4:11 (2024)** |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Shivaji University, Kolhapur ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಡಿಇವಿ: ಸಾ.ಸ.4:12 (2024)** |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ICAR – Central Marine Fisheries Research Institute, Kochi (CMFRI) ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು |

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಸಾ.ಸ.4:13 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ನಿಟ್ಟೆ ಇನ್ಸ್ಟಿಟ್ಯೂಟ್ ಆಫ್ ಫಿಸಿಯೋಥೆರಪಿ, ದೇರಳಕಟ್ಟೆ ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ: ಸಾ.ಸ.4:14 (2024)**

ವಿಷಯ: Ombudsperson ನೇಮಕಾತಿ ಬಗ್ಗೆ.

ನಿರ್ಣಯ: ಕಾರ್ಯಸೂಚಿಯಲ್ಲಿ ನಮೂದಿಸಲಾಗಿರುವ ದಿನವೊಂದಕ್ಕೆ ರೂ.1,000/- ಎಂಬುದನ್ನು ಒಂದು **sitting**ಗೆ ರೂ.1,000/- ಎಂಬುದಾಗಿ ತಿದ್ದುಪಡಿ ಮಾಡಿಕೊಳ್ಳಲು ಸೂಚಿಸಿ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಕಾನೂನು ಘಟಕ :ಸಾ.ಸ.4:15 (2024)**

ವಿಷಯ: BSR Infratech ಸಂಸ್ಥೆಯವರು ದಾಖಲಿಸಿರುವ Arbitrator ಪ್ರಕರಣವನ್ನು ನಿರ್ವಹಿಸುತ್ತಿರುವ ನ್ಯಾಯವಾದಿ ಶ್ರೀ ರಾಜೇಂದ್ರ ಕುಮಾರ್ ಸುಂಗೆ ಇವರಿಗೆ ಮಧ್ಯಂತರ ಬಿಲ್ಲು ಪಾವತಿಸುವ ಬಗ್ಗೆ ಘಟನೋತ್ತರ ಅನುಮತಿ ಪಡೆಯುವ ಕುರಿತು.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ :ಸಾ.ಸ.4:16 (2024)**

ವಿಷಯ: ಡಾ.ಬಿ.ಆರ್.ಮಂಜುನಾಥ, ಹಿರಿಯ ಪ್ರಾಧ್ಯಾಪಕರು ಹಾಗೂ ಅಧ್ಯಕ್ಷರು, ಸಾಗರ ಭೂವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ BUSAN, Korea ಇಲ್ಲಿ ಸಂಶೋಧನಾ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಎಸಿಸಿ :ಸಾ.ಸ.4:17 (2024)** |
| ವಿಷಯ: | ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ನಿಗದಿಪಡಿಸಿರುವ ಕನಿಷ್ಟ ವಿದ್ಯಾರ್ಥಿ ಪರಿಮಿತಿಯನ್ನು ಹೆಚ್ಚಿಸುವ ಬಗ್ಗೆ. |
| ನಿರ್ಣಯ: | ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪರಿಮಿತಿಯನ್ನು ಸ್ನಾತಕ ಕಾರ್ಯಕ್ರಮಗಳಿಗೆ 20 ಹಾಗೂ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ 15 ಎಂಬುದಾಗಿ ನಿಗದಿಪಡಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.<br>ಸರಕಾರಿ / ಅನುದಾನಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕ ತರಗತಿಗಳಿಗೆ ಮಾತ್ರ ವಿದ್ಯಾರ್ಥಿ ಪರಿಮಿತಿಯನ್ನು ಕಾಲೇಜು ಶಿಕ್ಷಣ ಇಲಾಖೆಯ ಮಾರ್ಗಸೂಚಿಯಂತೆ ಕ್ರಮವಹಿಸಲು ನಿರ್ಣಯಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | **ಎಸಿಸಿ :ಸಾ.ಸ.4:18 (2024)** |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಆವರಣ ಮತ್ತು ಘಟಕ ಕಾಲೇಜುಗಳಲ್ಲಿ ನಡೆಸಲಾಗುವ ಒಂದೇ ಶಿರೋನಾಮೆಯ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ವಿದ್ಯಾರ್ಥಿ ಪ್ರವೇಶಾತಿ ಸಂಖ್ಯೆಗಳಿಗನುಗುಣವಾಗಿ ವಿಲೀನಗೊಳಿಸುವ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು :ಸಾ.ಸ.4:19 (2024)** |
| ವಿಷಯ: | ಪದವಿ ಮಟ್ಟದ ಮಾನವ ಸಂಪನ್ಮೂಲ ಅಭಿವೃದ್ಧಿ BA (HRD) ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು :ಸಾ.ಸ.4:20(2024)** |
| ವಿಷಯ: | ಸ್ನಾತಕ ಕಾರ್ಯಕ್ರಮಗಳಿಗೆ ಕಡ್ಡಾಯ ಕೋರ್ಸಿಗೆ ಸಂಬಂಧಿಸಿ ಅಧ್ಯಯನ ಮಂಡಳಿಯನ್ನು ರಚಿಸುವ ಬಗ್ಗೆ. |
| ನಿರ್ಣಯ: | ಅಧ್ಯಯನ ಮಂಡಳಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು. |

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ಬೆಳಪು ಇಲ್ಲಿ ನಡೆಯುತ್ತಿರುವ ಪ್ರಗತಿಗಳ ಪರಿಶೀಲನೆ ಬಗ್ಗೆ ಎಲ್ಲಾ ಸಿಂಡಿಕೇಟು ಸದಸ್ಯರುಗಳು ಭೇಟಿ ನೀಡುವುದಾಗಿ ಹಾಗೂ ಸದರಿ ಯೋಜನೆಗೆ ಸರಕಾರದಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನ ಮತ್ತು ಈಗಾಗಲೇ ಸದರಿ ಯೋಜನೆಗೆ ಖರ್ಚಾಗಿರುವ ಮೊತ್ತದ ಬಗ್ಗೆ ಒಂದು ಕೋಷ್ಟಕವನ್ನು ತಯಾರಿಸಿ ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ಒದಗಿಸಿಕೊಡಬೇಕಾಗಿ ಹಣಕಾಸು ಅಧಿಕಾರಿ (ಪ್ರಭಾರ) ಇವರಿಗೆ ತಿಳಿಸಲಾಯಿತು.

   ಮುಂದುವರಿದು, ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ಬೆಳಪು ಮತ್ತು ಅಂತರಾಷ್ಟ್ರೀಯ ವಸತಿ ಸಮುಚ್ಚಯಗಳ ಬಗ್ಗೆ ಅಂಕಿ ಅಂಶಗಳೊಂದಿಗೆ ಸುದೀರ್ಘವಾಗಿ ಚರ್ಚಿಸಲು ಸಿಂಡಿಕೇಟು ಸಭೆ ನಡೆಸಲು ನಿರ್ಣಯಿಸಲಾಯಿತು.

2. ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸರಕಾರದಿಂದ ಬಿಡುಗಡೆಯಾಗಿರುವ ಅನುದಾನಗಳನ್ನು ಸರಕಾರವು ಯಾವ ಯೋಜನೆಗಳಿಗೆ ಬಿಡುಗಡೆ ಮಾಡಿರುತ್ತದೋ ಅವೇ ನಿಯೋಜಿತ ಯೋಜನೆಗಳಿಗೆ ವ್ಯಯಿಸುವುದಾಗಿ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಯಿತು.

3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ವಿಭಾಗ/ ಕೇಂದ್ರಗಳ ಮೂಲಕ ಯಾವುದೇ ಪ್ರಾಜೆಕ್ಟ್‌ಗಳು ಕಾರ್ಯನಿರ್ವಹಿಸದಿರುವ ಬಗ್ಗೆ ಸಭೆಯ ಗಮನಕ್ಕೆ ತರುತ್ತಾ, ಇದರಿಂದಾಗಿ ನ್ಯಾಕ್ ಮಾನ್ಯತಾ ಮಾನದಂಡದಲ್ಲಿಯೂ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಯಾವುದೇ ಗ್ರೇಡಿಂಗ್ ದಕ್ಕದಿರುವ ಬಗ್ಗೆಯೂ ಗಂಭೀರವಾಗಿ ಪರಿಗಣಿಸಲಾಯಿತು. ಮುಂದಿನ ದಿನಗಳಲ್ಲಿ ಸಿಂಡಿಕೇಟು ಸದಸ್ಯರುಗಳು ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸ್ನಾತಕೋತ್ತರ ವಿಭಾಗಗಳಿಗೆ ಸೌಹಾರ್ದಯುತ ಭೇಟಿ ನೀಡಿ ವಿಭಾಗಗಳ ಏಳಿಗೆ, ಪ್ರಗತಿಗಳ ಬಗ್ಗೆ ವಿಚಾರಿಸುವುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.

4. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿನ ಆಂತರಿಕ ಸಂಪನ್ಮೂಲಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪ್ರತಿಷ್ಠಿತ ಸಂಸ್ಥೆಗಳೊಂದಿಗೆ ಸಂಪರ್ಕಿಸಿಕೊಂಡು ಅಚ್ಚುಕಟ್ಟಾಗಿ ಕಾರ್ಯಯೋಜನೆಯನ್ನು ತಯಾರಿಸಿಕೊಂಡು ಕಾರ್ಯಪ್ರವೃತ್ತರಾಗುವುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೊಸ ಹೊಸ ತಾಂತ್ರಿಕ, ಅರೆ ವೈದ್ಯಕೀಯ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲು ಸೂಕ್ತ ಕ್ರಮಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಲಾಯಿತು.

5. DPR ತಯಾರು ಮಾಡಲು ಪರಿಣಿತ ಪ್ರಾಧ್ಯಾಪಕರುಗಳ ಸಮಿತಿಯನ್ನು ರಚಿಸಿಕೊಳ್ಳುವ ಬಗ್ಗೆ ಮಾನ್ಯ ಕುಲಪತಿಗಳಿಗೆ ಅಧಿಕಾರವನ್ನು ನೀಡಲಾಯಿತು. ಸದರಿ ಸಮಿತಿಯು ಇದಕ್ಕೆ ಸಂಬಂಧಿಸಿದಂತೆ ಕಾಲ ಕಾಲಕ್ಕೆ ವರದಿಯನ್ನು ಸಿಂಡಿಕೇಟು ಸಭೆಗಳಿಗೆ ಒದಗಿಸಬೇಕಾಗಿಯೂ ತಿಳಿಸಲಾಯಿತು.

6. AAA ಸಮಿತಿಯು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿ ಸಲ್ಲಿಸಿರುವ ವರದಿಯನ್ನು ಸಿಂಡಿಕೇಟು ಸದಸ್ಯರುಗಳಿಗೆ ಒದಗಿಸಬೇಕಾಗಿ ಸಭೆಯಲ್ಲಿ ಸೂಚಿಸಲಾಯಿತು.

7. ಶ್ರೀ ಅಚ್ಯುತ ಗಟ್ಟಿ, ಮಾನ್ಯ ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸಭೆಯಲ್ಲಿ ಓದಲಾಯಿತು. ಮಾನ್ಯ ಕುಲಪತಿಯವರು ಸದರಿ ವಿಚಾರವನ್ನು ಕೈಗೆತ್ತಿಕೊಂಡು ಸಿಂಡಿಕೇಟು ಸದಸ್ಯರುಗಳು ವಿಶ್ವವಿದ್ಯಾನಿಲಯದ ಏಳಿಗೆಗಾಗಿ ಶ್ರಮಿಸುತ್ತಿದ್ದು, ಮಾನ್ಯ ಸದಸ್ಯರುಗಳು ಸದರಿ ಉಪಸ್ಥಿತಿ ಭತ್ಯೆಯನ್ನು ಗೌರವಧನದ ರೀತಿ ಪರಿಗಣಿಸಿಕೊಳ್ಳಬೇಕಾಗಿ ತಿಳಿಸಿದರು.

8. ಶ್ರೀಮತಿ ಜುಡಿತ್ ಮೆಂಡೋನ್ಸ್, ಮಾನ್ಯ ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸಭೆಯಲ್ಲಿ ಓದಲಾಗಿ, ಸದರಿಯವರು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕುಂದ ಕನ್ನಡ ಪೀಠ ಸ್ಥಾಪನೆಗೆ ಸಂಬಂಧಿಸಿ ಸರಕಾರದಿಂದ ಶ್ರೀ ಜಯಪ್ರಕಾಶ್ ಹೆಗಡೆ., ಮಾಜಿ ಅಧ್ಯಕ್ಷರು, ಹಿಂದುಳಿದ ವರ್ಗ ಆಯೋಗ, ಕರ್ನಾಟಕ ಸರಕಾರ ಇವರ ನೇತೃತ್ವದಲ್ಲಿ ಅನುದಾನ ಬಿಡುಗಡೆಗೆ ಶ್ರಮಿಸಿದ್ದಕ್ಕಾಗಿ ಅಭಿನಂದನೆಯನ್ನು ಸಲ್ಲಿಸಲಾಯಿತು.

9. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ಎಲ್ಲಾ ಪೀಠಗಳಿಗೆ ಸಂಬಂಧಿಸಿದಂತೆ ಪರಿನಿಯಮಗಳ ವಿದ್ಯುನ್ಮಾನ ಪ್ರತಿ (soft copy) ಯನ್ನು ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ರವಾನಿಸಿಕೊಡಬೇಕಾಗಿ ಸಭೆಯಲ್ಲಿ ಸಲಹೆ ನೀಡಲಾಯಿತು.

10. ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸರಕಾರದಿಂದ ಹಂಚಿಕೆಯಾದ ಜಾಗಗಳ ಗಡಿ ಗುರುತಿಸುವಿಕೆಗೆ ಸಂಬಂಧಿಸಿದ ಕಾರ್ಯ ಪ್ರಗತಿಯಲ್ಲಿದ್ದು, ಸ್ವೀಕೃತಿಯಾಗುವ ವರದಿಯನ್ನು ಸರ್ವೆ ಕಾರ್ಯ ಮುಗಿದ ನಂತರ ಸಿಂಡಿಕೇಟು ಸಭೆಗೆ ವರದಿಯನ್ನು ಮಂಡಿಸಲಾಗುವುದಾಗಿ ಸಭೆಯಲ್ಲಿ ಕುಲಸಚಿವರು ಮಾಹಿತಿ ನೀಡಿದರು.

11. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಶಿಕ್ಷಕೇತರ ಸಿಬ್ಬಂದಿಗಳಿಗೆ ನೀಡಲಾಗುವ ಮುಂಭಡ್ತಿಗೆ ಸಂಬಂಧಿಸಿದಂತೆ ಈಗಾಗಲೇ ವಿಶ್ವವಿದ್ಯಾನಿಲಯದಲ್ಲಿ ಕೈಗೊಂಡಿರುವ ಪ್ರಗತಿಯ ಮಾಹಿತಿಯನ್ನು ಕುಲಪತಿಯವರು ಕೂಲಂಕಷವಾಗಿ ಸಭೆಗೆ ವಿವರಿಸಿದರು. ಜ್ಯೇಷ್ಠತೆ/ಮುಂಭಡ್ತಿಗೆ ಸಂಬಂಧಿಸಿದಂತೆ ಕಳೆದ ಮೂರು ತಿಂಗಳುಗಳಿಂದ ಕಾರ್ಯನಿರ್ವಹಿಸಿರುವ ಸಿಬ್ಬಂದಿಗಳ ಕೆಲಸವನ್ನು ಶ್ಲಾಘಿಸಿ, ಅಭಿನಂದನೆಯನ್ನು ಸಲ್ಲಿಸಲಾಯಿತು.

ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/- ಸಹಿ/-

**ಕುಲಸಚಿವರು** **ಕುಲಪತಿಯವರು**